All India Radio: Bangalore
Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

26.11.2025 6.40 p.m.

***************

ಮುಖ್ಯಾಂಶಗಳು

- ರಾಜ್ಯದ ೯ ಜಿಲ್ಲೆಗಳಲ್ಲಿ ಕೈಗಾರಿಕಾ ಕಾರಿಡಾರ್ ನಿರ್ಮಿಸಲು ಕೇಂದ್ರ ಸರ್ಕಾರ ಒಲವು
- ಮುಖ್ಯಮಂತ್ರಿ ಹುದ್ದೆಗಿಂತ ಪಕ್ಷವನ್ನು ಮತ್ತೆ ಅಧಿಕಾರಕ್ಕೆ ತರುವುದೇ ಮೊದಲ ಗುರಿ - ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್
- ವಿಶ್ವಬ್ಯಾಂಕ್ ರಿವಾರ್ಡ್ ಕಾರ್ಯಕ್ರಮದಲ್ಲಿ ಕರ್ನಾಟಕ ದೇಶಕ್ಕೆ ಮಾದರಿ
- ಬೆಳಗಾವಿ ಅಧಿವೇಶನದಲ್ಲಿ ಉತ್ತರಕರ್ನಾಟಕದ ಸಮಸ್ಯೆಗಳ ಚರ್ಚೆಗೆ ಹೆಚ್ಚಿನ ಅವಕಾಶ - ಸಭಾಪತಿ ಬಸವರಾಜ ಹೊರಟ್ಟಿ
- ರೈತರಿಗೆ ಬೆಳೆಹಾನಿ ಪರಿಹಾರ ಒದಗಿಸುವಲ್ಲಿ ರಾಜ್ಯ ಸರ್ಕಾರ ಸಂಪೂರ್ಣ ವಿಫಲ ; ಬಿಜೆಪಿ ಆರೋಪ

***************

ರಾಜ್ಯದ ಒಂಬತ್ತು ಜಿಲ್ಲೆಗಳನ್ನೊಳಗೊಂಡ ರಾಷ್ಟ್ರೀಯ ಕೈಗಾರಿಕಾ ಕಾರಿಡಾರ್ ಅಭಿವೃದ್ಧಿ ಯೋಜನೆಗೆ ಕೇಂದ್ರ ಸರ್ಕಾರ ಸಕಾರಾತ್ಮಕವಾಗಿ ಸ್ಪಂದಿಸಿದೆ.

ಕೇಂದ್ರ ಬೃಹತ್ ಕೈಗಾರಿಕೆ ಮತ್ತು ಉಕ್ಕು ಸಚಿವ ಹೆಚ್.ಡಿ. ಕುಮಾರಸ್ವಾಮಿ ವಾಣಿಜ್ಯ ಸಚಿವ ಪೀಯೂಶ್ ಗೋಯಲ್ ಅವರನ್ನು ಭೇಟಿಯಾಗಿ ಈ ಯೋಜನೆಯ ಪ್ರಸ್ತಾಪ ಮಾಡಿ, ಅನುಷ್ಠಾನಕ್ಕೆ ಕೋರಿದ್ದರು. ಈ ಯೋಜನೆಗೆ ವಾಣಿಜ್ಯ ಸಚಿವರು ಸಮ್ಮತಿ ಸೂಚಿಸಿ ಕುಮಾರಸ್ವಾಮಿ ಅವರಿಗೆ ಪತ್ರ ಬರೆದಿದ್ದಾರೆ.

ಮಂಡ್ಯ, ಮೈಸೂರು, ಚಾಮರಾಜನಗರ, ಕೋಲಾರ, ಹಾಸನ, ಮಂಗಳೂರು, ಹುಬ್ಬಳ್ಳಿ, ಧಾರವಾಡ, ರಾಯಚೂರು, ಬೀದರ್ ಜಿಲ್ಲೆಗಳನ್ನು ಒಳಗೊಂಡ ಯೋಜನೆ ಇದಾಗಿದೆ.

ಈ ಯೋಜನೆ ಅನುಷ್ಠಾನಕ್ಕೆ ಬಂದರೆ ರಾಜ್ಯದಲ್ಲಿ ಸರಕು, ಕೈಗಾರಿಕೆ ಉತ್ಪನ್ನಗಳ ಸಾಗಾಣೆ ಸುಲಭವಾಗಿ ಕೈಗಾರಿಕಾಭಿವೃದ್ಧಿ ವೇಗಗತಿಯಲ್ಲಿ ಸಾಗಲಿದೆ. ಉತ್ಪಾದನೆ ಮತ್ತು ಕೈಗಾರಿಕಾ ಸ್ಪರ್ಧಾತ್ಮಕತೆಯನ್ನು ಬಲಪಡಿಸುವ ಕೇಂದ್ರ ಸರ್ಕಾರದ ವಿಶಾಲ ದೃಷ್ಟಿಕೋನಕ್ಕೆ ಅನುಗುಣವಾಗಿ ಈ ಉಪಕ್ರಮವನ್ನು ದೊಡ್ಡ ಪ್ರಮಾಣದಲ್ಲಿ ಕೈಗೆತ್ತಿಕೊಳ್ಳಲಾಗುತ್ತಿದೆ ಎಂದು ಕುಮಾರಸ್ವಾಮಿ ತಿಳಿಸಿದ್ದಾರೆ.

***************

೨೦೨೮ರಲ್ಲಿ ಮರಳಿ ಪಕ್ಷವನ್ನು ಅಧಿಕಾರಕ್ಕೆ ತರುವ ಕಾರ್ಯತಂತ್ರದ ಬಗ್ಗೆ ಸತೀಶ್ ಜಾರಕಿಹೊಳಿ ಅವರೊಂದಿಗೆ ಬಗ್ಗೆ ಚರ್ಚಿಸಲಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿ ಹುದ್ದೆಗಿಂತ ಪಕ್ಷವನ್ನು ಮತ್ತೆ ಅಧಿಕಾರಕ್ಕೆ ತರುವುದು ತಮ್ಮ ಗುರಿ ಎಂದು ಹೇಳಿದ್ದಾರೆ.

ಸತೀಶ್ ಜಾರಕಿಹೊಳಿ ಪಕ್ಷದ ದೊಡ್ಡ ಆಸ್ತಿಯಾಗಿದ್ದು, ಉಭಯ ನಾಯಕರು ಜೊತೆಯಾಗಿ ಕಾರ್ಯ ನಿರ್ವಹಿಸುವುದಾಗಿ ತಿಳಿಸಿದ್ದಾರೆ. ನಾಯಕತ್ವ ಕುರಿತಂತೆ ಸೂಕ್ತ ಸಮಯದಲ್ಲಿ ಪಕ್ಷ ತೀರ್ಮಾನ ಮಾಡಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

***************

ಹವಾಮಾನ ಬದಲಾವಣೆ, ಭೂಕ್ಷಯ ಮತ್ತು ಶಾಶ್ವತ ಜಲಾನಯನ ನಿರ್ವಹಣೆಗೆ ಸಂಬಂಧಿಸಿದ ಜ್ಞಾನ ಮತ್ತು ಅನುಭವ ವಿನಿಮಯಕ್ಕೆ ಜಾಗತಿಕ ತಜ್ಞರು, ಸಂಶೋಧಕರು ಮತ್ತು ವಿಜ್ಞಾನಿಗಳನ್ನು ಒಂದೇ ವೇದಿಕೆಯಲ್ಲಿ ತರುವ ಮೂಲಕ ರೈತರ ಹಾಗೂ ಕೃಷಿ ಅಭಿವೃದ್ಧಿಗೆ ಪೂರಕವಾದ ನಿರ್ಣಯಗಳನ್ನು ಕೈಗೊಳ್ಳುವಂತೆ ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ಕರೆ ನೀಡಿದ್ದಾರೆ.

ವಿಶ್ವ ಬ್ಯಾಂಕ್ ಹಾಗೂ ಬೆಂಗಳೂರಿನ ಕೃಷಿ ವಿಶ್ವವಿದ್ಯಾನಿಲಯದ ಸಹಯೋಗದೊಂದಿಗೆ, ಮೂರು ದಿನಗಳ ಜಲಾನಯನ ಸ್ಥಿತಿಸ್ಥಾಪಕತ್ವ, ವಿಜ್ಞಾನ ಸುಸ್ಥಿರತೆ ಮತ್ತು ಸಮಾಜವನ್ನು ಸಂಯೋಜಿಸುವ ಕುರಿತು ಅಂತಾರಾಷ್ಟ್ರೀಯ ಸಮ್ಮೇಳನ ಉದ್ಘಾಟಿಸಿ ಮಾತನಾಡಿದ ಅವರು, ಕಳೆದ ನಾಲ್ಕು ದಶಕಗಳಿಂದ ಜಲಾನಯನ ಅಭಿವೃದ್ಧಿಯಲ್ಲಿ ರಾಜ್ಯ ಮುಂಚೂಣಿಯಲ್ಲಿದೆ ಎಂದು ಹೇಳಿದ್ದಾರೆ. ವಿಶ್ವಬ್ಯಾಂಕ್ ರಿವಾರ್ಡ್ ಕಾರ್ಯಕ್ರಮದಡಿ ನಡೆಯುತ್ತಿರುವ ಎಲ್‌ಆರ್‌ಐ ಆಧಾರಿತ ಜಲಾನಯನ ಅಭಿವೃದ್ಧಿ ರಾಜ್ಯದ ಸ್ಥೈರ್ಯವನ್ನು ಹೆಚ್ಚಿಸಿದೆ ಎಂದು ಅವರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ವಿಶ್ವ ಬ್ಯಾಂಕಿನ ಮುಖ್ಯ ಕೃಷಿ ತಜ್ಞ ಆಂಡ್ರೂ ವುಡ್ ಲ್ಯಾಂಡ್ ಮಾತನಾಡಿ, ಕರ್ನಾಟಕದಲ್ಲಿ ರಿವಾರ್ಡ್ ಕಾರ್ಯಕ್ರಮವು ಪರಿಣಾಮಕಾರಿಯಾಗಿ ಅನುಷ್ಠಾನಗೊಂಡಿದ್ದು, ಇತರ ರಾಜ್ಯಗಳಿಗೆ ಕರ್ನಾಟಕ ಮಾದರಿಯಾಗಿದೆ ಎಂದು ತಿಳಿಸಿದ್ದಾರೆ.

***************

ಬೆಳಗಾವಿ ಅಧಿವೇಶನದಲ್ಲಿ ಉತ್ತರ ಕರ್ನಾಟಕದ ಸಮಸ್ಯೆಗಳ ಚರ್ಚೆಗೆ ಬುಧವಾರ ಅವಕಾಶ ನೀಡಲಾಗುವುದು ಎಂದು ಸಭಾಪತಿ ಬಸವರಾಜ ಹೊರಟ್ಟಿ ತಿಳಿಸಿದ್ದಾರೆ.

ಹುಬ್ಬಳ್ಳಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಉತ್ತರ ಕರ್ನಾಟಕ ಭಾಗದ ಸದಸ್ಯರ ಪ್ರಶ್ನೆಗೆ ಹೆಚ್ಚಿನ ಅವಕಾಶ ನೀಡಲಾಗುವುದು ಎಂದು ಹೇಳಿದ್ದಾರೆ.

ಎಲ್ಲಾ ಶಾಸಕರು ಆಸಕ್ತಿ ವಹಿಸಿ ಸದನದಲ್ಲಿ ಭಾಗಿಯಾಗಬೇಕು ಎಂದು ತಿಳಿಸಿದ್ದಾರೆ. ಬೆಳಗಾವಿಯಲ್ಲಿ ಶಾಸಕರಿಗೆ ತಂಗಲು ಶಾಸಕರ ಭವನ ಕಟ್ಟಿಸುವ ಅವಶ್ಯಕತೆ ಇದ್ದು, ಈ ಬಗ್ಗೆ ಮುಖ್ಯಮಂತ್ರಿಯವರ ಜೊತೆ ಚರ್ಚೆ ಮಾಡಲಾಗುವುದು ಎಂದು ತಿಳಿಸಿದ್ದಾರೆ.

ಧ್ವನಿ : ಸಭಾಪತಿ ಬಸವರಾಜ ಹೊರಟ್ಟಿ

***************

ರೈತರ ಕಲ್ಯಾಣಕ್ಕಾಗಿ ರಾಜ್ಯ ಸರ್ಕಾರ ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ ಎಂದು ಮೈಸೂರು ಕೊಡಗು ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಆರೋಪಿಸಿದ್ದಾರೆ.

ಮೈಸೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎಲ್ಲದ್ದಕ್ಕೂ ಕೇಂದ್ರ ಸರ್ಕಾರವನ್ನು ದೂಷಿಸುವುದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ರಾಜಕೀಯ ತಂತ್ರಗಾರಿಕೆಯಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಕೇಂದ್ರ ಸರ್ಕಾರ ಕೃಷಿಯನ್ನು ಆದ್ಯತಾ ವಲಯವಾಗಿ ಪರಿಗಣಿಸಿದೆ. ಪ್ರಧಾನ ಮಂತ್ರಿ ಕಿಸಾನ್ ಯೋಜನೆ ಸೇರಿದಂತೆ ಹತ್ತಾರು ಯೋಜನೆಗಳನ್ನು ಕೇಂದ್ರ ಸರ್ಕಾರ ಜಾರಿ ಮಾಡಿದೆ. ಆದರೆ ಕಾಂಗ್ರೆಸ್ ಸರ್ಕಾರ ಕೃಷಿ ಅಭಿವೃದ್ಧಿಗೆ ಗಮನವನ್ನೇ ನೀಡುತ್ತಿಲ್ಲ ಎಂದು ದೂರಿದ್ದಾರೆ.

ಅತಿವೃಷ್ಟಿಯಿಂದಾಗಿ ಏಕದಳ, ದ್ವಿದಳ, ತೋಟಗಾರಿಕಾ ಬೆಳೆಗಳು ಹಾನಿಯಾಗಿವೆ. ರಾಜ್ಯ ಸರ್ಕಾರ ಬೆಳೆಹಾನಿ ಪರಿಹಾರ ಒದಗಿಸುವಲ್ಲಿಯೂ ವಿಳಂಬ ಮಾಡುತ್ತಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

***************

ಮತದಾರರ ನೋಂದಾಣಿಧಿಕಾರಿ ಮತ್ತು ಪ್ರಾದೇಶಿಕ ಅಧಿಕಾರಿ ಆಮ್ಲನ್ ಆದಿತ್ಯ ಬಿಸ್ವಾಸ್ ಇಂದು ಬೆಂಗಳೂರಿನಲ್ಲಿ ವಿಧಾನ ಪರಿಷತ್ತಿನ ಬೆಂಗಳೂರು ಶಿಕ್ಷಕರ ಕ್ಷೇತ್ರ ಮತ್ತು ಕರ್ನಾಟಕ ಆಗ್ನೇಯ ಪದವೀಧರರ ಕ್ಷೇತ್ರಗಳ ಕರಡು ಮತದಾರರ ಪಟ್ಟಿಯನ್ನು ಪ್ರಕಟಿಸಿದ್ದಾರೆ.

ಈ ಕರಡು ಮತದಾರರ ಪಟ್ಟಿಯಂತೆ ಬೆಂಗಳೂರು ಶಿಕ್ಷಕರ ಕ್ಷೇತ್ರದಲ್ಲಿ ೨೧ ಸಾವಿರದ ೪೯೬ ಶಿಕ್ಷಕರು ನೋಂದಾಯಿಸಿಕೊಂಡಿದ್ದಾರೆ. ಹಾಗೂ ಪದವೀಧರರ ಕ್ಷೇತ್ರದಲ್ಲಿ ಈವರೆಗೂ ೧ ಲಕ್ಷದ ೫೧ ಸಾವಿರದ ೩೭೪ ಪದವೀಧರರು ನೋಂದಾಯಿಸಿಕೊಂಡಿದ್ದಾರೆ.

೨೦೨೦ರಲ್ಲಿ ಪ್ರಕಟಗೊಂಡ ಮತದಾರರ ಪಟ್ಟಿಯಂತೆ ಶಿಕ್ಷಕರ ಕ್ಷೇತ್ರದಲ್ಲಿ ೨೧ ಸಾವಿರದ ೯೬೫ ಮತದಾರರು ಹಾಗೂ ಆಗ್ನೇಯ ಪದವೀಧರರ ಕ್ಷೇತ್ರದಲ್ಲಿ ೧ ಲಕ್ಷದ ೯ ಸಾವಿರದ ೧೨೭ ಮತದಾರರು ನೋಂದಾಯಿಸಿಕೊಂಡಿದ್ದರು.

ಚುನಾವಣಾ ಆಯೋಗದ ವೇಳಾಪಟ್ಟಿಯಂತೆ ಡಿಸೆಂಬರ್ ೧೦ರವರೆಗೂ ಕರಡು ಮತದಾರರ ಪಟ್ಟಿಗೆ ಹಕ್ಕು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸಲು ಅವಕಾಶವಿದೆ. ಸಹಾಯಕ ಮತದಾರರ ನೋಂದಾಣಿಧಿಕಾರಿಗಳ ಕಚೇರಿಯಲ್ಲಿ ಮತದಾರರು ತಮ್ಮ ಹಕ್ಕು ಮತ್ತು ಆಕ್ಷೇಪಣಾ ಅರ್ಜಿಗಳನ್ನು ಸಲ್ಲಿಸಬಹುದು ಹಾಗೂ ತಿದ್ದುಪಡಿಗೆ ಮನವಿ ಮಾಡಿಕೊಳ್ಳಬಹುದು ಎಂದು ಬಿಸ್ವಾಸ್ ತಿಳಿಸಿದ್ದಾರೆ.

***************

ರಾಜ್ಯದೆಲ್ಲೆಡೆ ಇಂದು ಸಂವಿಧಾನ ದಿನಾಚರಣೆ ಆಚರಿಸಲಾಯಿತು.

ಹುಬ್ಬಳ್ಳಿ ನೈಋತ್ಯ ರೈಲ್ವೆಯ ಪ್ರಧಾನ ಕಚೇರಿಯಾದ ರೈಲ್ ಸೌಧದಲ್ಲಿ ಸಂವಿಧಾನ ದಿನಾಚರಣೆ ಅರ್ಥಪೂರ್ಣವಾಗಿ ನೆರವೇರಿತು. ಈ ಸಂದರ್ಭದಲ್ಲಿ ನೈಋತ್ಯ ರೈಲ್ವೆಯ ಪ್ರಧಾನ ವ್ಯವಸ್ಥಾಪಕ ಶ ಮುಕುಲ್ ಶರಣ್ ಮಾಥುರ್ ಅವರು ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಭಾರತದ ಸಂವಿಧಾನದ ಆಶಯಗಳನ್ನು ವಿವರಿಸಿ, ಎಲ್ಲರಿಂದ ಸಂವಿಧಾನದ ಪ್ರಸ್ತಾವನೆಯನ್ನು ಬೋಧಿಸಿದರು.

ಗದಗ ಜಿಲ್ಲೆಯ ನಾಗಾವಿಯ ಗ್ರಾಮದಲ್ಲಿರುವ ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದಲ್ಲಿ ಸಂವಿಧಾನ ದಿನಾಚರಣೆ ನಡೆಯಿತು. ಸಂವಿಧಾನ ಶಿಲ್ಪಿ ಡಾ.ಬಿ.ಆರ್ ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಕುಲಸಚಿವ ಪ್ರೊ. ಸುರೇಶ್ ನಾಡಗೌಡರ ಪುಷ್ಪ ನಮನ ಸಲ್ಲಿಸಿ ಸಂವಿಧಾನದ ಮಹತ್ವವನ್ನು ವಿವರಿಸಿದರು.

ಬೆಳಗಾವಿಯಲ್ಲಿಯೂ ಭಾರತೀಯ ಸಂವಿಧಾನ ದಿನಾಚರಣೆಯನ್ನು ಆಚರಿಸಲಾಯಿತು. ಈ ನಿಮಿತ್ತ ಆಯೋಜಿಸಲಾದ ಸಂವಿಧಾನ ಜಾಗೃತಿ ಜಾಥಾಗೆ ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತೆ ಕೆ. ಎಮ್. ಜಾನಕಿ ಚಾಲನೆ ನೀಡಿದರು.

ಸಂವಿಧಾನದಲ್ಲಿನ ವಿವಿಧ ಕಾನೂನು ಕಾಯಿದೆಗಳು, ವಿಷಯಗಳನ್ನು ಇಂದಿನ ವಿದ್ಯಾರ್ಥಿಗಳು ಯುವಜನರು ಅರಿತು ಸಮಾಜದ ಬದಲಾವಣೆ ಮತ್ತು ದೇಶದ ಅಭಿವೃದ್ಧಿಗೆ ಸಹಕರಿಸಲು ಮುಂದಾಗಬೇಕು ಎಂದು ಚಿಕ್ಕಬಳ್ಳಾಪುರ ಕ್ಷೇತ್ರದ ಶಾಸಕ ಪ್ರದೀಪ್ ಈಶ್ವರ್ ಕರೆ ನೀಡಿದ್ದಾರೆ.

ಸಂವಿಧಾನವು ಕೇವಲ ಒಂದು ಗ್ರಂಥವಲ್ಲ, ಭಯಮುಕ್ತ ಬದುಕಿಗೆ ಇರುವ ಏಕೈಕ ಆಧಾರ ಸ್ತಂಭ ಎಂದು ಸಂಸದ ಶ್ರೇಯಸ್ ಪಟೇಲ್ ತಿಳಿಸಿದ್ದಾರೆ. ಹಾಸನದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಜಿಲ್ಲಾಡಳಿತದ ಆಯೋಜಿಸಿದ್ದ ೭೬ನೇ ಸಂವಿಧಾನ ದಿನಾಚರಣೆ ಕಾರ್ಯಕ್ರಮದಲ್ಲಿ

ಭಾಗವಹಿಸಿ ಮಾತನಾಡಿದ ಅವರು, ಡಾ. ಬಿ.ಆರ್. ಅಂಬೇಡ್ಕರ್ ಅವರು ನೀಡಿದ ಸಂವಿಧಾನವೇ ಸಮಾನತೆಗೆ ಕಾರಣವಾಗಿದೆ ಎಂದರು.

ರಾಮನಗರ ಜಿಲ್ಲೆಯ ಶಾಲಾ ಕಾಲೇಜುಗಳು, ಸರ್ಕಾರಿ ಕಚೇರಿಗಳು, ಸಂಘ ಸಂಸ್ಥೆಗಳು ಸೇರಿದಂತೆ ಹಲವೆಡೆ ಸಂವಿಧಾನ ದಿನವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

***************

ಬೆಂಗಳೂರು ಆಕಾಶವಾಣಿಯಲ್ಲಿಯೂ ಸಂವಿಧಾನ ದಿನ ಆಚರಿಸಲಾಯಿತು. ಈ ಸಂದರ್ಭದಲ್ಲಿ ಆಕಾಶವಾಣಿ ಸಿಬ್ಬಂದಿ ಸಂವಿಧಾನದ ಪೀಠಿಕೆಯನ್ನು ಓದಿದರು.

ಈ ಸಂದರ್ಭದಲ್ಲಿ ಬೆಂಗಳೂರು ದೂರದರ್ಶನದ ಉಪಮಹಾನಿರ್ದೇಶಕರಾದ ಎ. ಹನುಮಂತ್, ಆಕಾಶವಾಣಿ ಉಪಮಹಾ ನಿರ್ದೇಶಕರಾದ ಕೆ.ಪಿ. ಸಂಜೀವ್, ಹಿರಿಯ ಆಡಳಿತಾಧಿಕಾರಿ ಆರ್. ಶಿವಕುಮಾರ್, ಕಾರ್ಯಕ್ರಮ ವಿಭಾಗದ ಮುಖ್ಯಸ್ಥರಾದ ಡಾ. ಶಂಕರ್ ನಾರಾಯಣ್ ಸೇರಿದಂತೆ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

***************

ಬೆಂಗಳೂರು ಪೂರ್ವ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಸಿ.ಎಸ್.ಆರ್ ಅಡಿ ಮೇಲ್ಸೇತುವೆಗಳ ಕೆಲ ಭಾಗಗಳನ್ನು ಅಭಿವೃದ್ಧಿಪಡಿಸಲು ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ವಿವಿಧ ಸ್ಥಳಗಳಿಗೆ ಇಂದು ಭೇಟಿ ನೀಡಿ ಪರಿಶೀಲನೆ ನಡೆಸಿ ಮಾತನಾಡಿದ ಅವರು, ಇಬ್ಲೂರು ಜಂಕ್ಷನ್ ಬಳಿ ಮೇಲ್ಸೇತುವೆ ಕೆಳಭಾಗದಲ್ಲಿ ಈಗಾಗಲೇ ಸೌಂದರೀಕರಣ ಮಾಡಲಾಗಿದ್ದು, ಇದೇ ಮಾದರಿಯಲ್ಲಿ ಇತರೆ ಮೇಲ್ಸೇತುವೆಗಳ ಕೆಳಭಾಗದಲ್ಲಿ ಸಿ.ಎಸ್.ಆರ್ ಅಡಿ ಅಭಿವೃದ್ಧಿಪಡಿಸಲು ನಿರ್ದೇಶನ ನೀಡಿದ್ದಾರೆ.

ಸರ್ಜಾಪುರ ರಸ್ತೆ ವಿಪ್ರೋ ಬಳಿ ಡಾಂಬರೀಕರಣ ಕಾರ್ಯ ಪ್ರಗತಿಯಲ್ಲಿದ್ದು, ವಿಪ್ರೋದಿಂದ ಆಗಿರುವ ಡ್ರೈನ್ ಹಾಗೂ ಪಾಲಿಕೆಯಿಂದ ಆಗಿರುವ ಡ್ರೈನ್ ವಿಲೀನ ಮಾಡಿದರೆ ರಸ್ತೆಯಲ್ಲಿ ಜಲಾವೃತವಾಗುವ ಸಮಸ್ಯೆ ತಪ್ಪಲಿದೆ ಎಂದು ಹೇಳಿದ್ದಾರೆ.

******** ಮುಕ್ತಾಯ *******